**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ:- 2016ರ ಪರಿಷ್ಕೃತ ಯುಜಿಸಿ/ಐಸಿಎಆರ್/ಎಐಸಿಟಿಇ ವೇತನ ಶ್ರೇಣಿಗಳಲ್ಲಿನ ಬೋಧಕ ಮತ್ತು ತತ್ಸಮಾನ ವೃಂದದ ಸಿಬ್ಬಂದಿಗಳಿಗೆ ತುಟ್ಟಿಭತ್ಯೆಯ ದರಗಳನ್ನು ಪರಿಷ್ಕರಿಸುವ ಕುರಿತು.

ಓದಲಾಗಿದೆ:- 1. ಸ.ಆ. ಸಂಖ್ಯೆ: ಆಇ 3 ಎಸ್ಆರ್‌ಪಿ 2019 ದಿನಾಂಕ:15.05.2019.

2. ಸ.ಆ. ಸಂಖ್ಯೆ: ಆಇ 16 ಎಸ್ಆರ್‌ಪಿ 2019 ದಿನಾಂಕ: 25.10.2019.

3. ಸ.ಆ. ಸಂಖ್ಯೆ: ಆಇ 10 ಎಸ್ಆರ್‌ಪಿ 2020 ದಿನಾಂಕ: 05.05.2020.

4. ಸ.ಆ. ಸಂಖ್ಯೆ: ಆಇ 19 ಎಸ್ಆರ್‌ಪಿ 2021 ದಿನಾಂಕ: 29-07-2021.

5. ಸ.ಆ. ಸಂಖ್ಯೆ: ಆಇ 31 ಎಸ್ಆರ್‌ಪಿ 2021 ದಿನಾಂಕ: 27-10-2021.

6. ಭಾರತ ಸರ್ಕಾರದ ದಿನಾಂಕ: 31.03.2022ರ ಅಧಿಕೃತ ಜ್ಞಾಪನ ಸಂಖ್ಯೆ:1/2/2022 -E-II (B) ದಿನಾಂಕ: 31-03-2022.

---

**ಸರ್ಕಾರಿ ಆದೇಶ ಸಂಖ್ಯೆ: ಆಇ 23 ಎಸ್ಆರ್‌ಪಿ 2022**

**ಬೆಂಗಳೂರು, ದಿನಾಂಕ: 11ನೇ ಏಪ್ರಿಲ್ 2022**

2016ರ ಪರಿಷ್ಕೃತ ಯುಜಿಸಿ/ಐಸಿಎಆರ್/ಎಐಸಿಟಿಇ ವೇತನ ಶ್ರೇಣಿಗಳಲ್ಲಿನ ಬೋಧಕ ಮತ್ತು ತತ್ಸಮಾನ ವೃಂದದ ಸಿಬ್ಬಂದಿಗಳ ತುಟ್ಟಿಭತ್ಯೆಯ ದರಗಳನ್ನು ಪ್ರಸ್ತುತ ಮೂಲ ವೇತನದ **ಶೇಕಡ 31 ರಿಂದ ಶೇಕಡ 34ಕ್ಕೆ 1ನೇ ಜನವರಿ 2022**ರಿಂದ ಜಾರಿಗೆ ಬರುವಂತೆ ಪರಿಷ್ಕರಿಸಲು ಸರ್ಕಾರವು ಹರ್ಷಿಸುತ್ತದೆ.

2. ಈ ಆದೇಶದ ಉದ್ದೇಶಗಳಿಗಾಗಿ 'ಮೂಲ ವೇತನ' ಎಂದರೆ ಸರ್ಕಾರಿ ನೌಕರನು ಧಾರಣೆ ಮಾಡಿರುವ ಹುದ್ದೆಗೆ ಅನ್ವಯವಾಗುವ 2016ರ ಪರಿಷ್ಕೃತ ಯುಜಿಸಿ/ಐಸಿಎಆರ್/ಎಐಸಿಟಿಇ ವೇತನ ಶ್ರೇಣಿಗಳಲ್ಲಿ ಪಡೆಯುವ ವೇತನ.

3. ಯುಜಿಸಿ/ಐಸಿಎಆರ್/ಎಐಸಿಟಿಇ ವೇತನ ಶ್ರೇಣಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿಶ್ವವಿದ್ಯಾಲಯಗಳು, ಸರ್ಕಾರಿ/ಅನುದಾನಿತ ಶಿಕ್ಷಣ ಸಂಸ್ಥೆಗಳು, ಸರ್ಕಾರಿ ಸ್ವಾಯತ್ತ ಸಂಸ್ಥೆಗಳು ಇತ್ಯಾದಿ ಪೂರ್ಣಕಾಲಿಕ ನೌಕರರಿಗೆ ಈ ಆದೇಶಗಳು ಅನ್ವಯಿಸುತ್ತವೆ.

4. ವೇತನ ಎಂದು ಪರಿಗಣಿಸಲ್ಪಡದ ಯಾವುದೇ ಉಪಲಬ್ಧಗಳನ್ನು ಮೂಲ ವೇತನಕ್ಕೆ ಸೇರಿಸತಕ್ಕದ್ದಲ್ಲ.

5. ಈ ಆದೇಶದ ಮೇರೆಗೆ ಮಂಜೂರಾಗಿರುವ ತುಟ್ಟಿಭತ್ಯೆಯನ್ನು ಮುಂದಿನ ಆದೇಶದವರೆಗೆ ನಗದಾಗಿ ಪಾವತಿ ಮಾಡುವುದು.

6. ಯುಜಿಸಿ/ಐಸಿಎಆರ್/ಎಐಸಿಟಿಇ ವೇತನ ಶ್ರೇಣಿಗಳ ನಿವೃತ್ತ ನೌಕರರಿಗೆ ಈ ಆದೇಶಗಳು ಅನ್ವಯಿಸುವುದಿಲ್ಲ.

7. ಎನ್‌ಜೆಪಿಸಿ ವೇತನ ಶ್ರೇಣಿಯ ನ್ಯಾಯಾಂಗ ಅಧಿಕಾರಿಗಳು ಮತ್ತು ಪಿಂಚಣಿದಾರರಿಗೆ ಪ್ರತ್ಯೇಕ ಆದೇಶಗಳನ್ನು ಹೊರಡಿಸಲಾಗುವುದು.

8. ತುಟ್ಟಿಭತ್ಯೆಯ ಕಾರಣದಿಂದ ಸಂದಾಯ ಮಾಡಬೇಕಾಗಿರುವ ಐವತ್ತು ಪೈಸೆ ಹಾಗೂ ಅದಕ್ಕಿಂತ ಹೆಚ್ಚಿನ ಭಿನ್ನಾಂಕಗಳನ್ನು ಮುಂದಿನ ರೂಪಾಯಿಗೆ ಪೂರ್ಣಗೊಳಿಸತಕ್ಕದ್ದು ಮತ್ತು ಐವತ್ತು ಪೈಸೆಗಿಂತ ಕಡಿಮೆ ಇರುವ ಭಿನ್ನಾಂಕಗಳನ್ನು ಕಡೆಗಣಿಸತಕ್ಕದ್ದು.

9. ತುಟ್ಟಿಭತ್ಯೆಯ ಬಾಕಿ ಮೊತ್ತವನ್ನು, 2022ರ ಮಾರ್ಚ್ ಮಾಹೆಯ ವೇತನ ಬಟವಾಡೆಗೂ ಮೊದಲು ಪಾವತಿ ಮಾಡತಕ್ಕದ್ದಲ್ಲ.

10. ತುಟ್ಟಿಭತ್ಯೆಯನ್ನು ಸಂಭಾವನೆಯ ವಿಶಿಷ್ಟ ಅಂಶವಾಗಿ ತೋರಿಸುವುದು ಮತ್ತು ಯಾವುದೇ ಉದ್ದೇಶಕ್ಕಾಗಿ ಇದನ್ನು ವೇತನ ಎಂದು ಪರಿಗಣಿಸಲಾಗುವುದಿಲ್ಲ.

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ**
**ಮತ್ತು ಅವರ ಹೆಸರಿನಲ್ಲಿ,**

**(ಉಮಾ.ಕೆ).**
**ಸರ್ಕಾರದ ಉಪ ಕಾರ್ಯದರ್ಶಿ,**
**ಆರ್ಥಿಕ ಇಲಾಖೆ (ಸೇವೆಗಳು-2).**

ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಪ್ರಕಟಣೆಯಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 50 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು.

ಇವರಿಗೆ:
1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.
2. ಪ್ರಧಾನ ಮಹಾಲೇಖಪಾಲರು(G&SSA),ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ. ನಂ.5398), ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (E&RSA),ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ. ನಂ. 5398) ಬೆಂಗಳೂರು.

4. ಪ್ರಧಾನ ಮಹಾಲೇಖಪಾಲರು(ಲೆಕ್ಕಗಳು ಮತ್ತು ಹಕ್ಕುಗಳು),ಕರ್ನಾಟಕ, ಪಾರ್ಕ್‌ಹೌಸ್‌ರಸ್ತೆ(ಪಿ.ಬಿ. ನಂ.5329), ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
6. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
7. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
8. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಬೆಂಗಳೂರು.
9. ಎಲ್ಲಾ ಜಿಲ್ಲೆಗಳ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು.
10. ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ಕುಲಸಚಿವರು (ಆಡಳಿತ).
11. ಆಯುಕ್ತರು / ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ/ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು
12. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
13. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು.
14. ಯೋಜನಾ ನಿರ್ದೇಶಕರು, ಹೆಚ್‌ಆರ್‌ಎಂಎಸ್ 2.0, ಆರ್ಥಿಕ ಇಲಾಖೆ, 5ನೇ ಮಹಡಿ, ನ್ಯೂ ಕೆ.ಪಿ.ಸಿ.ಎಲ್. ಗ್ರೀನ್ ಬಿಲ್ಡಿಂಗ್ (ಸಿ.ಐ.ಡಿ. ಕಛೇರಿ ಹತ್ತಿರ), ಅರಮನೆ ರಸ್ತೆ, ಬೆಂಗಳೂರು-560001.
15. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
16. ವಾರಪತ್ರ/ಶಾಖೆಯ ರಕ್ಷಾ ಕಡತ.

**ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ಅಧಿಕೃತ ಅಂತರ್ಜಾಲತಾಣ www.finance.karnataka.gov.in ವೀಕ್ಷಿಸಿ.**



Government Press, Vikasa Soudha Unit, Bengaluru